ಈ) ನಾಡೋಜ ಡಾ॥ ಚನ್ನವೀರ ಕಣವಿ ಅವರ ಅಧ್ಯಕ್ಷತೆಯ ಸಮಿತಿಯು ನಾಡಗೀತೆಯ ಪಠ್ಯವನ್ನು ಒಂದು ನಿಮಿಷ ಮೂವತ್ತು ಸೆಕೆಂಡಿನಲ್ಲಿ ಹಾಡಲು ಮತ್ತು ಒಂದು ಪಲ್ಲವಿ ಹಾಗೂ ಎರಡು ಪದ್ಯ ಬಂಧಗಳಿಗೆ ಸಂಕ್ಷಿಪ್ತಗೊಳಿಸುವಂತೆ ಶಿಫಾರಸ್ಸು ಮಾಡಿದೆ. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಉ) ಇಲ್ಲ.

ಊ) ಸರ್ಕಾರದ ಪರಿಶೀಲನೆಯಲ್ಲಿದೆ.

ಪತ್ರಕರ್ತರಿಗೆ ಮಾಸಿಕ ಪಿಂಚಣಿ

615(776): ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

ಅ) ರಾಜ್ಯದಲ್ಲಿರುವ ಪತ್ರಕರ್ತರ ಸಂಖ್ಯೆ ಎಷ್ಟು;

ಆ) ಸಂಕಷ್ಟದಲ್ಲಿರುವ ಪತ್ರಕರ್ತರನ್ನು ಗುರುತಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಇವರಿಗೆ ಮಾಸಿಕ ಪಿಂಚಣಿ ನೀಡಲಾಗುತ್ತಿದೆಯೇ;

ಈ) ಇಲ್ಲಿಯವರೆಗೆ ಎಷ್ಟು ಜನ ಪತ್ರಕರ್ತರಿಗೆ ಮಾಸಿಕ ಪಿಂಚಣಿ ನೀಡಲಾಗಿದೆ;

ಉ) ಪತ್ರಕರ್ತರ ಮಾಸಿಕ ಪಿಂಚಣಿಯನ್ನು ಹೆಚ್ಚಿಸಲಾಗಿದೆಯೇ;

ಊ) ಹಾಗಿದ್ದಲ್ಲಿ, ಎಷ್ಟು ಮೊತ್ತದ ಮಾಸಿಕ ಪಿಂಚಣಿ ನೀಡಲಾಗುತ್ತಿದೆ?

ಶ್ರೀ ಆರ್.ರೋಷನ್‌ಬೇಗ್ (ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು)

ಅ) ರಾಜ್ಯದಲ್ಲಿರುವ ಪತ್ರಕರ್ತರ ಸಂಖ್ಯೆ ಕುರಿತ ಅಂಕಿ ಅಂಶಗಳು ಲಭ್ಯವಿರುವುದಿಲ್ಲ. ವಾರ್ತಾ ಇಲಾಖೆ ವತಿಯಿಂದ ರಾಜ್ಯದಲ್ಲಿ ಮಾನ್ಯತೆ ಪಡೆದ 1337 ಪತ್ರಕರ್ತರು ಇದ್ದಾರೆ.

ಆ) ದಿ:10.02.1984ರ ಸರ್ಕಾರಿ ಆದೇಶ ಸಂಖ್ಯೆ:ಐಟಿವೈ:159:ಪಿಐಎಸ್:83 ಹಾಗೂ ತತ್ಸಂಬಂಧಿ ಆದೇಶಗಳ ಅನ್ವಯ ಸಂಕಷ್ಟದಲ್ಲಿರುವ ಪತ್ರಕರ್ತರನ್ನು ಗುರುತಿಸಲಾಗಿದೆ.

ಇ) ಹೌದು. ನೀಡಲಾಗುತ್ತಿದೆ.

ಈ) ಸಂಕಷ್ಟದಲ್ಲಿರುವ 265 ಪತ್ರಕರ್ತರಿಗೆ ಮಾಸಾಶನ ಮಂಜೂರು ಮಾಡಲಾಗಿದೆ.

ಉ) ಮಾಸಾಶನದ ಮೊತ್ತವನ್ನು ₹ 3,000/– ರಿಂದ ₹ 6,000/–ಕ್ಕೆ ಹೆಚ್ಚಿಸುವ ಕುರಿತ ಪ್ರಸ್ತಾವನೆ ಪರಿಶೀಲನಾ ಹಂತದಲ್ಲಿದೆ.

ಊ) ಪ್ರಸ್ತುತ ಫಲಾನುಭವಿಗಳಿಗೆ ₹ 3,000/– ಮಾಸಾಶನ ದೊರೆಯುತ್ತಿದೆ.

ಭಾಷಾ ಮಾಧ್ಯಮ ಸಂಬಂಧ ಸುಪ್ರೀಂ ಕೋರ್ಟ್ ತೀರ್ಪು

616(777): ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮೀ ಲೇಔಟ್)

1) ಸರ್ವೋಚ್ಚ ನ್ಯಾಯಾಲಯದ ತೀರ್ಪಿನಿಂದ ಕನ್ನಡ ಭಾಷಾ ಮಾಧ್ಯಮದ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರವು ಸಂವಿಧಾನ ತಿದ್ದುಪಡಿಗೆ ಕೇಂದ್ರದ ಮನವೊಲಿಸಲು ಕೈಗೊಂಡ ಕ್ರಮಗಳೇನು;

2) ಈ ಬಗ್ಗೆ ಹಿಂದಿಯೇತರ ರಾಜ್ಯಗಳ ಮುಖ್ಯಮಂತ್ರಿಗಳ ಸಭೆಯನ್ನು ಕರೆದು ಪ್ರಧಾನ ಮಂತ್ರಿಗಳ ಬಳಿ ನಿಯೋಗ ಕರೆದೊಯ್ಯುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

1) ಭಾಷಾ ಮಾಧ್ಯಮದ ಕುರಿತು ಸರ್ವೋಚ್ಚ ನ್ಯಾಯಾಲಯದ ಸಾಂವಿಧಾನಿಕ ಪೀಠವು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ ಚರ್ಚಿಸುವ ಸಲುವಾಗಿ ಸನ್ಮಾನ್ಯ ಪ್ರಧಾನ ಮಂತ್ರಿಗಳ ಅಧ್ಯಕ್ಷತೆಯಲ್ಲಿ ಎಲ್ಲಾ